ಈ) ಈ ಸಂಬಂಧ ಅರಣ್ಯ ಇಲಾಖೆಯಿಂದ ಅಂದಾಜು ಮಾಡಿರುವ ನಷ್ಟದ ಮೌಲ್ಯವೆಷ್ಟು ?

ಶ್ರೀ ಹೆಚ್.ವೈ. ಮೇಟಿ (ಅರಣ್ಯ ಸಚಿವರು) :

ಅ) ಸರ್ವೆ ನಂಬರ್ 108ರಲ್ಲಿ ಕ್ವಾರಿ ಗಣಿಕಾರಿಕೆ ನಡೆದಿರುವುದಿಲ್ಲ. ಆದರೆ ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನವನ ವ್ಯಾಪ್ತಿಯ ಸರ್ವೆ ನಂ. 2ರಲ್ಲಿ (ಕಲ್ಕರೆ ಮೀಸಲು ಅರಣ್ಯ) ಅನಧಿಕೃತ ಕಲ್ಲು ಕ್ವಾರಿ ಗಣಿಗಾರಿಕೆ ನಡೆದಿತ್ತು.

ಆ) ಹೌದು

ಇ) ಬನ್ನೇರುಘಟ್ಟ ಉದ್ಯಾನವನದ ಪ್ರದೇಶದಲ್ಲಿಯ ಎಲ್ಲಾ ಅಕ್ರಮ ಕ್ವಾರಿ ಗಣಿಗಾರಿಕೆಯನ್ನು ತಡೆಯಲು ಕ್ರಮ ಕೈಗೊಳ್ಳಲಾಗಿದೆ.

ಈ) ನಷ್ಟದ ಅಂದಾಜು ಮಾಡಲಾಗುತ್ತಿದೆ.

ಖಾಸಗಿಯಾಗಿ ಪಿಯುಸಿ ಪರೀಕ್ಷೆಗೆ ಕುಳಿತುಕೊಳ್ಳುವ ಅವಧಿಯನ್ನು 19 ವರ್ಷದಿಂದ ಇಳಿಸುವ ಬಗ್ಗೆ

464 - ಶ್ರೀ ಯು.ಆರ್. ಸಭಾಪತಿ (ಉಡುಪಿ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯಾದ್ಯಂತ ಖಾಸಗಿಯಾಗಿ ಪಿಯುಸಿ ಪರೀಕ್ಷೆಗೆ ಕುಳಿತುಕೊಳ್ಳಲು 19 ವರ್ಷ ವಯಸ್ಸು ನಿಗದಿ ಪಡಿಸಿರುವುದರಿಂದ, ಖಾಸಗಿಯಾಗಿ ಪರೀಕ್ಷೆಗೆ ಕುಳಿತುಕೊಳ್ಳುವ ವಿದ್ಯಾರ್ಥಿಗಳಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಸರ್ಕಾರದವರು ಖಾಸಗಿಯಾಗಿ ಪರೀಕ್ಷೆಗೆ ಕುಳಿತುಕೊಳ್ಳುವವರಿಗೆ ವಯೋಮಿತಿಯನ್ನು ಸಡಿಲಗೊಳಿಸಲಾಗುವುದೇ.

ಇ) ಹಾಗಿದ್ದಲ್ಲಿ ಎಂದಿನಿಂದ ಸಡಿಲಗೊಳಿಸಲಾಗುವುದು?

ಶ್ರೀ ಹೆಚ್.ಜಿ. ಗೋವಿಂದಗೌಡ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು):

ಅ) ಇಲ್ಲ.

ಆ) ಸಧ್ಯಕ್ಕೆ ಈ ಬಗ್ಗೆ ಯಾವುದೇ ಪ್ರಸ್ತಾವನೆ ಇರುವುದಿಲ್ಲ.

ಇ) ಪ್ರಶ್ನೆ ಉದ್ಭವಿಸುವುದಿಲ್ಲ.

ಶಿವಮೊಗ್ಗ ಜಿಲ್ಲೆಯಲ್ಲಿ ಸರ್ಕಾರದಿಂದ ಮಾನ್ಯತೆ ಪಡೆದ ಪ್ರೌಢಶಾಲೆಗಳು

521 - ಶ್ರೀ ಅರಗಜ್ಞಾನೇಂದ್ರ (ತೀರ್ಥಹಳ್ಳಿ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಶಿವಮೊಗ್ಗ ಜಿಲ್ಲೆಯಲ್ಲಿ ಸರ್ಕಾರದಿಂದ ಮಾನ್ಯತೆ ಪಡೆದಿರುವ ಖಾಸಗಿ ಪ್ರೌಢ ಶಾಲೆಗಳೆಷ್ಟು ?

ಆ) ಇವುಗಳಲ್ಲಿ ಈ ಸಾಲಿನ ಎಸ್ಎಸ್ಎಲ್ಸಿ ಪರೀಕ್ಷೆಯಲ್ಲಿ ಸೊನ್ನೆ ಫಲಿತಾಂಶ ಬಂದಿರುವ ಪ್ರೌಢ ಶಾಲೆಗಳೆಷ್ಟು? ಮತ್ತು ಅವುಗಳ ಯಾವುವು?

ಇ) ಇವುಗಳಲ್ಲಿ ಅನುದಾನಿತ ಶಾಲೆಗಳೆಷ್ಟು ಸೊನ್ನೆ ಫಲಿತಾಂಶ ಬಂದಿರುವ ಶಾಲೆಗಳ ಬಗ್ಗೆ ಸರ್ಕಾರದವರು ಕೈಗೊಳ್ಳಲಿರುವ ಕ್ರಮಗಳೇನು?

ಶ್ರೀ ಹೆಚ್.ಜಿ. ಗೋವಿಂದಗೌಡ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು):

ಅ) 252

ಆ) 02